ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 942 |
| ಸದಸ್ಯರ ಹೆಸರು | ಡಾ. ಕೆ. ಗೋವಿಂದರಾಜ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15-12-2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರಗಳು |
|---|---|---|
| ಅ) | ರಾಜ್ಯದ ಪ್ರತಿಷ್ಠಿತ ಕ್ಯಾನ್ಸರ್ ಆಸ್ಪತ್ರೆಯಾಗಿರುವ ಹೆಚ್.ಸಿ.ಜಿ (ಹೆಲ್ತ್ ಕೇರ್ ಗ್ಲೋಬಲ್ ಎಂಟರ್‌ಪ್ರೈಸಸ್ ಲಿಮಿಟೆಡ್) ವಿರುದ್ಧ ಅತ್ಯಂತ ಗಂಭೀರವಾದ ಆರೋಪ ಕೇಳಿ ಬಂದಿದ್ದು, "ಕ್ಲಿನಿಕಲ್ ಟ್ರಯಲ್ ಚಟುವಟಿಕೆಗಳಲ್ಲಿ ಈ ಆಸ್ಪತ್ರೆ ಹಗರಣ ರೀತಿಯ ನೀತಿಬಾಹಿರ ಕೃತ್ಯಗಳಲ್ಲಿ ತೊಡಗಿರುವ ಬಗ್ಗೆ ವರದಿಯಾಗಿದ್ದು, ವಾಸ್ತವ ವಿಚಾರಗಳ ಬಗ್ಗೆ ವಿವರಗಳನ್ನು ನೀಡುವುದು; | ಕ್ಲಿನಿಕಲ್ ಟ್ರಯಲ್‌ಗಳಿಗೆ ಸಂಬಂಧಿಸಿದ ವಿಷಯ ಮತ್ತು ನಿಯಂತ್ರಣವು ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಆಡಳಿತ (CDSCO)ರವರ ಕಾರ್ಯವ್ಯಾಪ್ತಿಗೆ ಒಳಪಡುತ್ತದೆ.<br><br>ಕ್ಲಿನಿಕಲ್ ಟ್ರಯಲ್ ಚಟುವಟಿಕೆಗಳಲ್ಲಿ ಹೆಚ್.ಸಿ.ಜಿ ಆಸ್ಪತ್ರೆ ಹಗರಣ ರೀತಿಯ ನೀತಿಬಾಹಿರ ಕೃತ್ಯಗಳಲ್ಲಿ ತೊಡಗಿರುವ ಬಗ್ಗೆ South First Digital publication ವರದಿ ಪ್ರಕಟವಾದ ಮೇರೆಗೆ CDSCO New Delhi ರವರು ಸದರಿ ವಿಷಯದ ಕುರಿತು ತನಿಖೆ ಕೈಗೊಳ್ಳುವ ನಿಟ್ಟಿನಲ್ಲಿ ತನಿಖಾ ತಂಡವನ್ನು ರಚಿಸಿ, ತನಿಖೆಯನ್ನು ಕೈಗೊಂಡು ವರದಿಯನ್ನು ಕೇಂದ್ರದ ಡ್ರಗ್ಸ್ ಕಂಟ್ರೋಲ್ ಜನರಲ್ ಇಂಡಿಯಾ ರವರಿಗೆ ನಿಯಮಗಳು 2019ರ ನಿಯಮ 30 ಪ್ರಕಾರ ಸಂಸ್ಥೆಯ ವಿರುದ್ಧ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಶಿಫಾರಸ್ಸಿನೊಂದಿಗೆ ಸಲ್ಲಿಸಲಾಗಿದೆ.<br><br>ಸದರಿ ಸಂಸ್ಥೆಯ ವಿರುದ್ಧ Drugs Controller General of India, CDSCO New Delhi ರವರು ಕ್ರಮವನ್ನು ಕೈಗೊಂಡು ದಿ: 17.07.2025ರಂದು Show Cause Notice ನೀಡಿರುತ್ತಾರೆ. ದಿನಾಂಕ: 12.09.2025ರಂದು ಸದರಿ ಸಂಸ್ಥೆಯವರನ್ನು ವಿಚಾರಣೆ ನಡೆಸಿರುತ್ತಾರೆ. |
| ಆ) | ಹೆಚ್.ಸಿ.ಜಿ ಆಸ್ಪತ್ರೆ ಅತ್ಯಂತ ಪ್ರತಿಷ್ಠಿತ ಆಸ್ಪತ್ರೆಯಾಗಿದ್ದು, ಸಾಕಷ್ಟು ರೋಗಿಗಳು ಶುಶ್ರೂಷೆಗಾಗಿ ಅಲ್ಲಿಗೆ ಹೋಗುತ್ತಿದ್ದು ಅಲ್ಲಿ ಅಕ್ರಮ ನಡೆದಿದ್ದರೆ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯ ನಿರ್ವಹಿಸುವ ಕೇಂದ್ರದ Drugs Controller General of India, CDSCO New Delhi ರವರು ಇದರ ಬಗ್ಗೆ ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940 ಮತ್ತು ಅದರಡಿಯ ನಿಯಮಾವಳಿಗಳ ಪ್ರಕಾರ ಕ್ರಮ ಕೈಗೊಳ್ಳುತ್ತಾರೆ. |

ಸಂಖ್ಯೆ: ಆಕುಕ 126 ಎಸ್‌ಟಿಕ್ಯೂ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ